# ಕರ್ನಾಟಕ ವಿಧಾನ ಪರಿಷತ್ತು
## 144ನೇ ಅಧಿವೇಶನ 2021

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2(184)

ಮಾನ್ಯ ಸದಸ್ಯರ ಹೆಸರು: ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು: ಮಾನ್ಯ ಉನ್ನತ ಶಿಕ್ಷಣ ಸಚಿವರು

ಉತ್ತರಿಸಬೇಕಾದ ದಿನಾಂಕ: 13-09-2021

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2013ರಲ್ಲಿ ಬೀದರ್ ಜಿಲ್ಲೆಗೆ ಕೇಂದ್ರ ಸರ್ಕಾರದಿಂದ ಮೌಲಾನಾ ಅಜಾದ ನ್ಯಾಷನಲ್ ಉರ್ದು ಸರ್ಕ್ಯೂಟ್ ವಿಶ್ವವಿದ್ಯಾಲಯ ಘೋಷಣೆಯಾಗಿದ್ದು, ಹಾಗೂ ಅದರ ಅಡಿಗಲ್ಲು ಸಮಾರಂಭವಾಗಿದ್ದು ಸರ್ಕಾರದ ಗಮನದಲ್ಲಿದೆಯೇ: | ಸಂಸತ್ತು ಅಧಿನಿಯಮತಿಗೊಳಿಸಿದ ಕೇಂದ್ರ ಶಾಸನದ ಮೂಲಕ ಹೈದರಾಬಾದಿನಲ್ಲಿ ಸ್ಥಾಪಿತವಾಗಿರುವ ಮೌಲಾನಾ ಅಬ್ದುಲ್ ಕಲಂ ಆಜಾದ್ ರಾಷ್ಟ್ರೀಯ ಉರ್ದು ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗಿದ್ದು, ಈ ವಿಶ್ವವಿದ್ಯಾಲಯದ ಆಫ್ ಕ್ಯಾಂಪಸ್ ಕೇಂದ್ರವಾಗಿ ಬೀದರ್‌ನಲ್ಲಿ ಬೋಧಕ ಶಿಕ್ಷಣ ಮಹಾವಿದ್ಯಾಲಯವನ್ನು ಆರಂಭಿಸಲಾಗಿದೆ.<br>ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯದ ವ್ಯಾಪ್ತಿಗೆ ಬರುವ ಮೌಲಾನಾ ಅಬ್ದುಲ್ ಕಲಂ ಆಜಾದ್ ರಾಷ್ಟ್ರೀಯ ಉರ್ದು ವಿಶ್ವವಿದ್ಯಾಲಯ ಹಾಗೂ ಬೀದರ್‌ನಲ್ಲಿರುವ ಅದರ ಆಫ್ ಕ್ಯಾಂಪಸ್ ಕೇಂದ್ರವು ರಾಜ್ಯ ಸರ್ಕಾರದ ಆಡಳಿತ ನಿಯಂತ್ರಣಕ್ಕೆ ಒಳಪಡುವುದಿಲ್ಲ. ಈ ಹಿನ್ನೆಲೆಯಲ್ಲಿ, ಬೀದರ್‌ನಲ್ಲಿರುವ ಬೋಧಕ ಶಿಕ್ಷಣ ಮಹಾವಿದ್ಯಾಲಯದಲ್ಲಿ ಮೂಲಸೌಕರ್ಯಗಳ ಕೊರತೆ ಇರುವ ಕುರಿತು ರಾಜ್ಯ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯಿಂದ ಕ್ರಮ ಇರುವುದಿಲ್ಲ. |
| ಆ) | ಹಾಗಿದ್ದಲ್ಲಿ, ಇಷ್ಟು ವರ್ಷಗಳಾದರೂ ಈ ವಿಶ್ವವಿದ್ಯಾಲಯಕ್ಕೆ ಸ್ವಂತ ಕಟ್ಟಡ ಏಕೆ ಪ್ರಾರಂಭವಾಗಿಲ್ಲ; ಕಾರಣ ನೀಡುವುದು ಇದರಿಂದ ಬಡ ಮಕ್ಕಳು ಸೌಲಭ್ಯಗಳಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | |
| ಇ) | ಈ ವಿಶ್ವವಿದ್ಯಾಲಯಕ್ಕೆ ಜಿಲ್ಲಾಡಳಿತ ತಾಲ್ಲೂಕಿನ ಗೊನ್ನಳ್ಳಿ ಸರ್ವೆ ನಂ. 98ರಲ್ಲಿ ಜಮೀನು ನೀಡಲಾಗಿದ್ದು ಈ ವಿಶ್ವವಿದ್ಯಾಲಯದ ಕಟ್ಟಡ ಯಾವ ವರ್ಷದಲ್ಲಿ ಪ್ರಾರಂಭವಾಗುವುದು? | ಈ ಕುರಿತಂತೆ ಮೌಲಾನಾ ಅಬ್ದುಲ್ ಕಲಂ ಆಜಾದ್ ರಾಷ್ಟ್ರೀಯ ಉರ್ದು ಸರ್ಕ್ಯೂಟ್ ವಿಶ್ವವಿದ್ಯಾಲಯವು ಕ್ರಮ ಕೈಗೊಳ್ಳಬೇಕಾಗಿರುತ್ತದೆ. |

**ಸಂಖ್ಯೆ: ಇಡಿ/231/ಯುಎನ್ಇ/2021**

**(ಡಾ|| ಅಶ್ವಥ್ ನಾರಾಯಣ ಸಿ.ಎನ್)**
ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ, ವಿಜ್ಞಾನ
ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಇಲಾಖೆಗಳ ಸಚಿವರು